## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಕೃಷ್ಣಾ ನದಿಯಿಂದ ಲಿಫ್ಟ್ ಮುಖಾಂತರ ರಾಯಚೂರು ತಾಲ್ಲೂಕಿನ 18 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು ವಿಶೇಷ ಅಭಿವೃದ್ಧಿ ಯೋಜನೆಯಡಿ ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡುವ ಕುರಿತು

***

**ಓದಲಾಗಿದೆ:-** 1. ಯೋಜನಾ ಇಲಾಖೆ ಆದೇಶ ಸಂಖ್ಯೆ:ಪಿಡಿಎಸ್ 32 ಎಸ್.ಡಿ.ಪಿ. 2020 ದಿನಾಂಕ:05/10/2020.

2. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರ ಪತ್ರ ಸಂಖ್ಯೆ:ವ್ಯನಿ/126ನೇ ಮಂಡಳಿ/ತಾಂತ್ರಿಕ-1/2020-21/2192 ದಿನಾಂಕ:05/11/2020.

**ಪ್ರಸ್ತಾವನೆ:-**

ಮೇಲೆ (1) ರಲ್ಲಿ ಓದಲಾದ ಆದೇಶದಲ್ಲಿ 2020-21ನೇ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿ ಕೃಷ್ಣಾ ಭಾಗ್ಯ ಜಲ ನಿಗಮಕ್ಕೆ ಒಟ್ಟು ರೂ.171.17 ಕೋಟಿ ಮೊತ್ತಕ್ಕೆ 8 ಕಾಮಗಾರಿಗಳ ಕ್ರಿಯಾ ಯೋಜನೆಗೆ ಅನುಮೋದನೆ ನೀಡಲಾಗಿದ್ದು, ಈ ಪೈಕಿ ರಾಯಚೂರು ತಾಲ್ಲೂಕಿನ 18 ಕೆರೆಗಳನ್ನು ಕೃಷ್ಣಾ ನದಿಯಿಂದ ಲಿಫ್ಟ್ ಮುಖಾಂತರ ನೀರನ್ನು ಎತ್ತಿ ತುಂಬಿಸುವ ಯೋಜನೆಯ ಒಳಗೊಂಡಿದ್ದು, ಸದರಿ ಯೋಜನೆಗೆ 2020-21ನೇ ಸಾಲಿಗೆ ರೂ.31.59 ಕೋಟಿ ಅನುದಾನ ಅನುಮೋದನೆಗೊಂಡಿರುತ್ತದೆ.

ಮೇಲೆ ಓದಲಾದ (2) ರ ಪತ್ರದಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ ಇವರು ಕೃಷ್ಣಾ ನದಿಯಿಂದ ಲಿಫ್ಟ್ ಮುಖಾಂತರ ರಾಯಚೂರು ತಾಲ್ಲೂಕಿನ 18 ಕೆರೆಗಳಿಗೆ ನೀರು ತುಂಬಿಸುವ ರೂ.192.00 ಕೋಟಿ (2018-19ನೇ ಸಾಲಿನ ದರಪಟ್ಟಿಯನ್ವಯ) ಅಂದಾಜು ಮೊತ್ತದ ಸದರಿ ಯೋಜನೆಯನ್ನು ವಿಶೇಷ ಅಭಿವೃದ್ಧಿ ಯೋಜನೆಯಡಿ (ಎಸ್.ಡಿ.ಪಿ) 2020-21ನೇ ಸಾಲಿನಲ್ಲಿ ಪ್ರಸ್ತಾಪಿಸಲಾಗಿದ್ದು, ದಿನಾಂಕ:05/10/2020ರಂದು ಜರುಗಿದ ಕೃಷ್ಣಾ ಭಾಗ್ಯ ಜಲ ನಿಗಮದ 126ನೇ ನಿರ್ದೇಶಕರ ಮಂಡಳಿಯ ಶಿಫಾರಸ್ಸಿನನ್ವಯ ಮತ್ತು ಮೇಲೆ ಓದಲಾದ (1) ರಲ್ಲಿನ ಆದೇಶದಲ್ಲಿ ಅನುಮೋದಿಸಿರುವಂತೆ, ಕೃಷ್ಣಾ ನದಿಯಿಂದ ಲಿಫ್ಟ್ ಮುಖಾಂತರ ರಾಯಚೂರು ತಾಲ್ಲೂಕಿನ 18 ಕೆರೆಗಳಿಗೆ ನೀರು ತುಂಬಿಸುವ ರೂ.192.00 ಕೋಟಿ (2018-19ನೇ ಸಾಲಿನ ದರಪಟ್ಟಿಯನ್ವಯ) ಅಂದಾಜು ಮೊತ್ತದಲ್ಲಿ ಯೋಜನೆಯನ್ನು ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತದಿಂದ ಕೈಗೆತ್ತಿಕೊಳ್ಳಲು ಸರ್ಕಾರದ ಆಡಳಿತಾತ್ಮಕ ಅನುಮೋದನೆ ಕೋರಲಾಗಿದೆ.

----- 2)-

ಅದರಂತೆ ಪ್ರಸ್ತಾವನೆಯಲ್ಲಿನ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಜಸಂಇ 15 ಕೆಬಿಎನ್ 2020, ಬೆಂಗಳೂರು, ದಿನಾಂಕ:25/01/2021**

ರಾಯಚೂರು ತಾಲ್ಲೂಕಿನ 18 ಕೆರೆಗಳನ್ನು ಕೃಷ್ಣಾ ನದಿಯಿಂದ ಲಿಫ್ಟ್ ಮುಖಾಂತರ ನೀರನ್ನು ಎತ್ತಿ ತುಂಬಿಸುವ ರೂ.192.00 ಕೋಟಿಗಳ (2018-19ನೇ ಸಾಲಿನ ದರಪಟ್ಟಿಯನ್ವಯ) ಅಂದಾಜು ಮೊತ್ತದ.....ಯೋಜನೆಯನ್ನು ವಿಶೇಷ ಅಭಿವೃದ್ಧಿ ಯೋಜನೆಯಡಿ (SDP) ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ, ಪ್ರಸಕ್ತ ಸಾಲಿನಲ್ಲಿ ಮೊದಲನೇ ಹಂತಕ್ಕೆ ರೂ.125.00 ಕೋಟಿಗಳಿಗೆ ಮತ್ತು ಮುಂದಿನ ಆರ್ಥಿಕ ವರ್ಷದಲ್ಲಿ 2ನೇ ಹಂತಕ್ಕೆ ರೂ.67.00 ಕೋಟಿಗಳಿಗೆ ಟೆಂಡರ್ ಅಹ್ವಾನಿಸುವ ಷರತ್ತಿಗೊಳಪಟ್ಟು ಪ್ರಸ್ತಾವನೆಗೆ ಅನುಮೋದನೆ ನೀಡಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯು ಟಿಪ್ಪಣಿ ಸಂಖ್ಯೆ:ಆಇ 368 ಆಕೋ-1/2020 (ಇ-ಆಫೀಸ್) ದಿನಾಂಕ:02/01/2021 ರಲ್ಲಿ ನೀಡಿರುವ ಸಹಮತಿ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

25/01/2021
(ರವೀಂದ್ರ ಕೊಂಡ)
ಸರ್ಕಾರದ ಅಧೀನ ಕಾರ್ಯದರ್ಶಿ (ತಾಂತ್ರಿಕ-5)
ಜಲ ಸಂಪನ್ಮೂಲ ಇಲಾಖೆ

ಪ್ರತಿಯನ್ನು:

1. ಮಹಾಲೇಖಪಾಲರು (ಎ & ಇ)/(ಇ & ಆರ್.ಎಸ್.ಎ)/(ಜಿ & ಎಸ್.ಎಸ್.ಎ) ಕರ್ನಾಟಕ, ಬೆಂಗಳೂರು.
2. ಮಾನ್ಯ ಮುಖ್ಯ ಮಂತ್ರಿಯವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
3. ಮಾನ್ಯ ಜಲ ಸಂಪನ್ಮೂಲ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜ. ಸಂ. ಇಲಾಖೆ.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು ಯೋಜನಾ ಇಲಾಖೆ.
7. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಯೋಜನಾ ಇಲಾಖೆ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಜ.ಸಂ.ಇಲಾಖೆ, ವಿಕಾಸಸೌಧ,
10. ಸರ್ಕಾರದ ಹೆಚ್ಚುವರಿ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸಸೌಧ, ಬೆಂಗಳೂರು
11. ವ್ಯವಸ್ಥಾಪಕ ನಿರ್ದೇಶಕರು, ಕೃಷ್ಣಾ ಭಾಗ್ಯ ಜಲ ನಿಗಮ ನಿಯಮಿತ, ಬೆಂಗಳೂರು
12. ಮುಖ್ಯ ಇಂಜಿನಿಯರ್, ಜಲ ಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಬೆಂಗಳೂರು,
13. ಮುಖ್ಯ ಇಂಜಿನಿಯರ್, ಕಾಲುವೆ ವಲಯ ನಂ.1, ಭೀಮರಾಯನಗುಡಿ.
14. ವಿಶೇಷಾಧಿಕಾರಿಗಳು ಮತ್ತು ಪದನಿಮಿತ್ತ ಜಂಟಿ ಕಾರ್ಯದರ್ಶಿಗಳು (ಲೋಇ-ಆಕೋ) ಆರ್ಥಿಕ ಇಲಾಖೆ, ಬೆಂಗಳೂರು.
15. ಸರ್ಕಾರದ ಉಪ ಕಾರ್ಯದರ್ಶಿ (ಕೃಭಾಜನಿ) ಜಲ ಸಂಪನ್ಮೂಲ ಇಲಾಖೆ.
16. ಉಪ ಕಾರ್ಯದರ್ಶಿಗಳು (ಸಚಿವ ಸಂಪುಟ) ವಿಧಾನ ಸೌಧ, ಬೆಂಗಳೂರು.
17. ತಾಂತ್ರಿಕ ಸಹಾಯಕರು-6, ಜಲ ಸಂಪನ್ಮೂಲ ಇಲಾಖೆ.
18. ಶಾಖಾ ರಕ್ಷಕ ಕಡತ / ಹೆಚ್ಚುವರಿ ಪ್ರತಿಗಳು.